## ಕರ್ನಾಟಕ ಸರ್ಕಾರ ನಡವಳಿಗಳು

**ವಿಷಯ:**- ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುವ ನೀತಿ ಮತ್ತು ವಿಧಾನವನ್ನು ಮಾರ್ಪಡಿಸುವ ಕುರಿತು.

**ಓದಲಾಗಿದೆ:**- 1. ಸರ್ಕಾರದ ಆದೇಶ ಸಂ:ಎಂಡಬ್ಲ್ಯೂಡಿ 06 ಎಂಡಿಸಿ 2021, ದಿ:26.02.2021.
2. ಸರ್ಕಾರದ ಆದೇಶ ಸಂ:ಎಂಡಬ್ಲ್ಯೂಡಿ 81 ಎಂಡಿಸಿ 2021, ದಿ:02.12.2021.
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಂ.ಡಿ.ಸಿ. ಇವರ ಏಕಕಡತ ದಿ:12.04.2022.
4. ಸರ್ಕಾರದ ಆದೇಶ ಸಂ:ಎಂಡಬ್ಲ್ಯೂಡಿ 50 ಎಂಡಿಸಿ 2022, ದಿ:27.06.2022

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರದ ಆದೇಶ ದಿ:26.02.2021 ರಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳ್ಳುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಯುವುದು, ಪಂಪ್‌ಸೆಟ್ ಅಳವಡಿಸುವುದು ಹಾಗೂ ವಿದ್ಯುದ್ದೀಕರಣ ಸಂಪರ್ಕವನ್ನು ಕಲ್ಪಿಸುವ ಕಾಮಗಾರಿಗಳನ್ನು ನಿಯಮಾನುಸಾರ ಟೆಂಡರ್ ಪರಿಶೀಲನಾ ಸಮಿತಿಯಲ್ಲಿ ಮಂಡಿಸಿ ನಂತರ ಒಂದೇ ಟೆಂಡರ್ ಅಡಿ ಕರೆದು ಅನುಷ್ಠಾನಗೊಳಿಸಲು ಹಲವು ಷರತ್ತುಗಳಿಗೆ ಒಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ. ಸದರಿ ಆದೇಶದಲ್ಲಿ ಈ ಯೋಜನೆಯಡಿ ಕೊಳವೆ ಬಾವಿಗಳನ್ನು "ನೀರಿಲ್ಲದಿದ್ದರೆ ಹಣವಿಲ್ಲ" (No water No Money) ಎಂಬ ಷರತ್ತಿನ ಆಧಾರದ ಮೇಲೆ ಟೆಂಡರ್ ಆಹ್ವಾನಿಸುವ ಷರತ್ತನ್ನು ವಿಧಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಸರ್ಕಾರದ ಆದೇಶ ದಿನಾಂಕ: 02.12.2021ರಲ್ಲಿ ಸರ್ಕಾರದ ಆದೇಶ ಸಂ:MWD 6 MDC 2021 ದಿ:26.02.2021 ನ್ನು ಮಾರ್ಪಡಿಸಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆಬಾವಿಗಳನ್ನು ಕೊರೆಯುವ, ಪಂಪ್‌ಸೆಟ್ ಅಳವಡಿಸುವ ಹಾಗೂ ವಿದ್ಯುದ್ದೀಕರಣ ಸಂಪರ್ಕವನ್ನು ಕಲ್ಪಿಸುವ ಕಾಮಗಾರಿಗಳನ್ನು ಈ ಕೂಡಲೇ ಜಾರಿಗೆ ಬರುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಮೂಲಕ ಅನುಷ್ಠಾನಗೊಳಿಸಲು ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿನ ಏಕಕಡತದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ 2019-20, 2020-21 ಹಾಗೂ 2021-22ನೇ ಸಾಲಿನ ಫಲಾನುಭವಿಗಳು ನಿಯಮಾನುಸಾರ ಆಯ್ಕೆಯಾಗಿದ್ದು, ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ವಿಧಾನದ ಬಗ್ಗೆ ಸರ್ಕಾರದ ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿನ ಸರ್ಕಾರದ ಆದೇಶ ದಿನಾಂಕ:27.06.2022 ರಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯನ್ನು ಫಲಾನುಭವಿಗಳಿಗೆ DBT (Direct Benefit Transfer) ಮೂಲಕ ಸಹಾಯಧನ ಮತ್ತು ಸಾಲ ಸೌಲಭ್ಯವನ್ನು ನೀಡಿ ಹಲವು ಷರತ್ತುಗಳಿಗೆ ಒಳಪಟ್ಟು ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ.

K.M.D.C. Ltd.
Head Office
05 AUG 2022
3HH
No. ..........

........2

ಮುಂದುವರೆದು, 2019-20ನೇ ಸಾಲಿನಿಂದ ಆಯ್ಕೆಯಾಗಿರುವ/ಆಯ್ಕೆಯಾಗುವ ಫಲಾನುಭವಿಗಳಿಗೆ ಸದರಿ ಯೋಜನೆಯ ಅಡಿಯಲ್ಲಿ ಅನುದಾನವನ್ನು DBT (Direct Benefit Transfer) ಮೂಲಕ ನೇರವಾಗಿ ವರ್ಗಾವಣೆ ಮಾಡಲು ಹಾಗೂ ಈ ಹಣವನ್ನು NATIONAL PAYMENT CORPORATION OF INDIA ಮೂಲಕ E-Rupee ರೂಪದಲ್ಲಿ ನೀಡಲು ಸರ್ಕಾರವು ತೀರ್ಮಾನಿಸಿದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD 32 MDC 2022, ಬೆಂಗಳೂರು ದಿನಾಂಕ:04.08.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿನ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಯುವ, ಪಂಪ್ ಸೆಟ್ ಅಳವಡಿಸುವ ಹಾಗೂ ವಿದ್ಯುದ್ದೀಕರಣ ಸಂಪರ್ಕವನ್ನು ಕಲ್ಪಿಸುವ ಕಾಮಗಾರಿಗಳನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಮೂಲಕ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದ್ದ ಸರ್ಕಾರದ ಆದೇಶ ಸಂಖ್ಯೆ:MWD 81 MDC 2021, ದಿನಾಂಕ:02-12-2021 ನ್ನು ಹಿಂಪಡೆಯಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: MWD 50 MDC 2022, ದಿನಾಂಕ:27-06-2022 ರಲ್ಲಿನ ಷರತ್ತುಗಳಿಗೆ ಒಳಪಟ್ಟು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2019-20 ನೇ ಸಾಲಿನಿಂದ ಅನುಷ್ಠಾನವಾಗುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿಗಳನ್ನು ಕೊರೆಯುವುದು, ಪಂಪು ಮೋಟಾರ್ ಅಳವಡಿಸಿ ವಿದ್ಯುದ್ದೀಕರಣ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸಹಾಯಧನವನ್ನು ನೇರವಾಗಿ Direct Benefit Transfer (DBT) ಮೂಲಕ ಆಯ್ಕೆಯಾಗಿರುವ/ಆಯ್ಕೆಯಾಗುವ ಅರ್ಹ ಫಲಾನುಭವಿಗಳಿಗೆ ವರ್ಗಾವಣೆ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಅರ್ಹ ಫಲಾನುಭವಿಗಳಿಗೆ ಸಹಾಯಧನವನ್ನು National Payment Corporation of India (NPCI) ಮೂಲಕವಾಗಿ E-Rupee ರೂಪದಲ್ಲಿ ಸಂದಾಯ ಮಾಡತಕ್ಕದ್ದು, ಈ ಕುರಿತು ಇ-ಆಡಳಿತ ಇಲಾಖೆಯೊಂದಿಗೆ ಸಮನ್ವಯ ಸಾಧಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/8/2022
(ಮುಕ್ತಾರ್ ಪಾಷ ಹೆಚ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.

**ಗೆ,**

1. ಮಹಾಲೇಖಪಾಲರು, (ಎ & ಇ, ಲೆಕ್ಕಪರಿಶೋಧನೆ-1, 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಬೆಂಗಳೂರು
4. ಯೋಜನಾ ನಿರ್ದೇಶಕರು, ಇ-ಆಡಳಿತ ಕೇಂದ್ರ, ಸಿಆಸುಇ, ಶಾಂತಿನಗರ, ಬೆಂಗಳೂರು-27.
5. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ. ವಿಧಾನ ಸೌಧ, ಬೆಂಗಳೂರು
6. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು ವಿಕಾಸ ಸೌಧ, ಬೆಂಗಳೂರು.
7. ಸಮನ್ವಯಾಧಿಕಾರಿ, ಸಹಾಯವಾಣಿ ಕೇಂದ್ರ (24*7), ವಸಂತ ನಗರ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with OKEN Scanner